# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಹಿರೇಕೆರೂರು ತಾಲ್ಲೂಕು ಪಂಚಾಯತಿ 12ನೇ ಹಣಕಾಸು ಕ್ರಿಯಾ ಯೋಜನೆಯಡಿ ಅನುದಾನ ದುರ್ಬಳಕೆಯಲ್ಲಿ ಭಾಗಿಯಾಗಿರುವವರ ವಿರುದ್ಧ ಜಂಟಿ ಇಲಾಖಾ ವಿಚಾರಣೆ ಯನ್ನು ನಡೆಸಲು ವಿಚಾರಣಾಧಿಕಾರಿಯವರನ್ನು ನೇಮಿಸುವ ಬಗ್ಗೆ.

**ಓದಲಾಗಿದೆ:** 1.ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿ.ಪಂ., ಹಾವೇರಿ ಇವರ ಪತ್ರ ಸಂಖ್ಯೆ: ಹಾಜಿಪಂ:ಅಭಿ-1: ಕಳಪೆ ಕಾಮಗಾರಿ:ವಹಿ:87:09-10/4343 ದಿನಾಂಕ:15-03-2010
2.ಕಾರಣ ಕೇಳುವ ನೋಟೀಸ್ ಸಂಖ್ಯೆ: ಗ್ರಾಅಪ 52 ವಿಸೇಜ2010, ದಿನಾಂಕ:13-08-2012
3. ಆರೋಪಿ ಅಧಿಕಾರಿಗಳ ಲಿಖಿತ ಹೇಳಿಕೆಗಳು ದಿನಾಂಕ:17-08-2012 ಹಾಗೂ 07-09-2012.

---------

**ಪ್ರಸ್ತಾವನೆ:**

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಹಾವೇರಿ ಇವರು ಮೇಲೆ ಕ್ರಮ ಸಂಖ್ಯೆ (1) ರಲ್ಲಿ ಓದಲಾದ ದಿನಾಂಕ:15-03-2010 ರ ಪ್ರಸ್ತಾವನೆಯಲ್ಲಿ ಹಿರೇಕೆರೂರು ತಾಲ್ಲೂಕು ಪಂಚಾಯತಿ ವ್ಯಾಪ್ತಿಯಲ್ಲಿ 2007-08ನೇ ಸಾಲಿನ 12ನೇ ಹಣಕಾಸು ನಿರ್ವಹಣೆಯಲ್ಲಿ ಎಸಗಿರುವ ಅಕ್ರಮಗಳು, ಹಣ ದುರುಪಯೋಗ, ಇತ್ಯಾದಿಗಳ ಬಗ್ಗೆ ಈ ಕೆಳಕಂಡ ಅಧಿಕಾರಿ/ನೌಕರರ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಲು ಕೋರಿರುತ್ತಾರೆ.

1) ಶ್ರೀ ಕೆ. ಬಿ. ಚನ್ನಪ್ಪ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾ.ಪಂ., ಹಿರೇಕೆರೂರು
2) ಶ್ರೀ ಹೆಚ್. ಹನುಮಂತಪ್ಪ, ಹಿಂದಿನ ಕಿರಿಯ ಇಂಜಿನಿಯರ್, ಪಂ. ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಹಿರೇಕೆರೂರು (ನಿಯೋಜನೆ ಬ್ಯಾಡಗಿ)
3) ಶ್ರೀ ಮನೋಹರ್ ಹಾದಿಮನಿ, ಹಿಂದಿನ ಕಿರಿಯ ಇಂಜಿನಿಯರ್, ಪಂ., ರಾಜ್ ಇಂಜಿನಿಯರಿಂಗ್ ಉಪ ವಿಭಾಗ ಹಿರೇಕೆರೂರು
4) ಶ್ರೀ ವಿ. ಎಸ್. ಪವಾರ್, ಹಿಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್ (ಪ್ರಭಾರ) ಪಂ. ರಾಜ್ ಇಂಜಿನಿಯರಿಂಗ್ ಉಪ ವಿಭಾಗ ಹಿರೇಕೆರೂರು
5) ಶ್ರೀ ನಾಗರಾಜ್, ಕಿರಿಯ ಇಂಜಿನಿಯರ್, ಪಂ. ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಹಿರೇಕೆರೂರು
6) ಶ್ರೀ ಬಿ. ಬಸವಣ್ಣೆಪ್ಪ, ಹಿಂದಿನ ಕಿರಿಯ ಇಂಜಿನಿಯರ್, ಪಂ. ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಹಿರೇಕೆರೂರು
7) ಶ್ರೀ ವಿ. ಕೆ. ಟಿಕಾರಿ, ಹಿಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಪಂ. ರಾಜ್ ಇಂಜಿನಿಯರಿಂಗ ಉಪ ವಿಭಾಗ, ಹಿರೇಕೆರೂರು

ಮೇಲ್ಕಂಡ ಆರೋಪಿತ ಅಧಿಕಾರಿ/ನೌಕರರ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವನಿಮೇ) 1957ರ ನಿಯಮ 11 ರಡಿ ಮತ್ತು ಕ್ರಮ ಸಂಖ್ಯೆ 1ರ ಅಧಿಕಾರಿಯಾದ ಶ್ರೀ ಕೆ. ಬಿ. ಚನ್ನಪ್ಪ ಇವರ ವಿರುದ್ಧ ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳ ನಿಯಮ 214 ರಡಿ ಶಿಸ್ತು ಕ್ರಮ ಜರುಗಿಸಲು ಮೇಲೆ ಕ್ರಮ ಸಂಖ್ಯೆ (2) ರಲ್ಲಿ ಓದಲಾದ ದಿನಾಂಕ:13-08-2012ರ ಕಾರಣ ಕೇಳುವ ನೋಟೀಸ್ ನೊಂದಿಗೆ ದೋಷಾರೋಪಣಾ ಪಟ್ಟಿ ಅನುಬಂಧ-1 ರಿಂದ 4ನ್ನು ಜಾರಿ ಮಾಡಲಾಗಿತ್ತು. ಸದರಿ ಕಾರಣ ಕೇಳುವ ನೋಟೀಸಿಗೆ ಆರೋಪಿತ ಅಧಿಕಾರಿ/ನೌಕರರುಗಳು ಮೇಲೆ ಕ್ರಮ ಸಂಖ್ಯೆ (3) ರಲ್ಲಿ ಓದಲಾದ ಅವರ ಲಿಖಿತ ಹೇಳಿಕೆಯನ್ನು ಸಲ್ಲಿಸುತ್ತಾ, ಅವರ ಮೇಲಿನ ಎಲ್ಲಾ ಆರೋಪಗಳನ್ನು ನಿರಾಕರಿಸಿರುತ್ತಾರೆ. ಆದುದರಿಂದ ಆಪಾದಿತರ ಮೇಲಿನ ಆರೋಪಗಳ ಕುರಿತಾದ ಸತ್ಯಾಸತ್ಯತೆಯನ್ನು ಅರಿಯಲು ವಿವರವಾದ ಇಲಾಖಾ ವಿಚಾರಣೆಯನ್ನು ಜರುಗಿಸಲು ನಿರ್ಧರಿಸಿ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 52 ವಿಸೇಜ 2010, ಬೆಂಗಳೂರು, ದಿನಾಂಕ:04-07-2013**

ಪ್ರಸ್ತಾವನೆಯಲ್ಲಿ ವಿವರಿಸಲಾದ ಕಾರಣಗಳಿಂದ ಹಿರೇಕೆರೂರು ತಾಲ್ಲೂಕು ಪಂಚಾಯತಿ ವ್ಯಾಪ್ತಿಯಲ್ಲಿ 2007-08ನೇ ಸಾಲಿನ 12ನೇ ಹಣಕಾಸು ಯೋಜನೆಯಡಿ ಅಳವಡಿಸಲಾಗಿದ್ದ

ಕಾಮಗಾರಿಗಳ ಅನುಷ್ಠಾನದಲ್ಲಿ ನಡೆದಿರುವ ಅವ್ಯವಹಾರ ಕುರಿತಂತೆ ಈ ಕೆಳಕಂಡ ಅಧಿಕಾರಿ/ ನೌಕರರುಗಳಾದ:

1) ಶ್ರೀ ಕೆ. ಬಿ. ಚನ್ನಪ್ಪ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾ.ಪಂ., ಹಿರೇಕೆರೂರು
2) ಶ್ರೀ ಹೆಚ್. ಹನುಮಂತಪ್ಪ, ಹಿಂದಿನ ಕಿರಿಯ ಇಂಜಿನಿಯರ್, ಪಂ. ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಹಿರೇಕೆರೂರು (ನಿಯೋಜನೆ ಬ್ಯಾಡಗಿ)
3) ಶ್ರೀ ಮನೋಹರ್ ಹಾದಿಮನಿ, ಹಿಂದಿನ ಕಿರಿಯ ಇಂಜಿನಿಯರ್, ಪಂ., ರಾಜ್ ಇಂಜಿನಿಯರಿಂಗ್ ಉಪ ವಿಭಾಗ ಹಿರೇಕೆರೂರು
4) ಶ್ರೀ ವಿ. ಎಸ್. ಪವಾರ್, ಹಿಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್ (ಪ್ರಭಾರ) ಪಂ. ರಾಜ್ ಇಂಜಿನಿಯರಿಂಗ್ ಉಪ ವಿಭಾಗ ಹಿರೇಕೆರೂರು
5) ಶ್ರೀ ನಾಗರಾಜ್, ಕಿರಿಯ ಇಂಜಿನಿಯರ್, ಪಂ. ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಹಿರೇಕೆರೂರು
6) ಶ್ರೀ ಬಿ.ಬಸವಣ್ಣೆಪ್ಪ, ಕಿರಿಯ ಇಂಜಿನಿಯರ್, ಪಂ. ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಹಿರೇಕೆರೂರು
7) ಶ್ರೀ ವಿ. ಕೆ. ಟಿಕಾರಿ, ಹಿಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಪಂ. ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಹಿರೇಕೆರೂರು

ಇವರುಗಳ ವಿರುದ್ಧ ಕನಾಟಕ ನಾಗರೀಕ ಸೇವಾ (ವ.ನಿ.ಮೇ) ನಿಯಮಗಳು 1957ರ ನಿಯಮ 11 ರಡಿ ಜಂಟಿ ಇಲಾಖಾ ವಿಚಾರಣೆಯನ್ನು ಜರುಗಿಸಲು ಹಾಗೂ ಕ್ರಮ ಸಂ(1) ರಲ್ಲಿರುವ ಶ್ರೀ ಕೆ. ಬಿ. ಚನ್ನಪ್ಪ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾ.ಪಂ., ಹಿರೇಕೆರೂರು ರವರು ನಿವೃತ್ತಿ ಹೊಂದಿರುವುದರಿಂದ, ಇವರ ವಿರುದ್ಧ ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳ ನಿಯಮ 214 ರಲ್ಲಿರುವಂತೆ ಇಲಾಖಾ ವಿಚಾರಣೆ ನಡೆಸಲು ಶ್ರೀ ಎಸ್. ಜಿ. ಪಲ್ಲೇದ್ ನಿವೃತ್ತ ಜಿಲ್ಲಾ ನ್ಯಾಯಾಧೀಶರು, ಇವರನ್ನು ವಿಚಾರಣಾಧಿಕಾರಿಯನ್ನಾಗಿ ಮತ್ತು ಸಹಾಯಕ ಕಾರ್ಯದರ್ಶಿ, ಜಿಲ್ಲಾ ಪಂಚಾಯತ್, ಹಾವೇರಿ, ಇವರನ್ನು ಮಂಡನಾಧಿಕಾರಿಯನ್ನಾಗಿ ನೇಮಿಸಿದೆ.

ವಿಚಾರಣಾಧಿಕಾರಿಯವರು ಇಲಾಖಾ ವಿಚಾರಣೆಯನ್ನು ಕನಾಟಕ ನಾಗರೀಕ ಸೇವಾ (ವ.ನಿ.ಮೇ) ನಿಯಮಗಳು 1957ರ ನಿಯಮ 11 ರಡಿ ಕಾರ್ಯವಿಧಾನದ ಪ್ರಕಾರ ಜರುಗಿಸಿ ಇಲಾಖಾ ವಿಚಾರಣಾ ವರದಿಯನ್ನು ನಾಲ್ಕು ತಿಂಗಳೊಳಗಾಗಿ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

ವಿಚಾರಣಾಧಿಕಾರಿಗಳು ಇಲಾಖಾ ವಿಚಾರಣಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿದ ನಂತರ ನಿಯಮಾನುಸಾರ ನಿಗದಿತ ಸಂಭಾವನೆಯನ್ನು ಪಡೆಯಲು ಅರ್ಹರಿರುತ್ತಾರೆ.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಹಾವೇರಿ ಇವರು ವಿಚಾರಣಾಧಿಕಾರಿಯವರಿಗೆ ಅಗತ್ಯ ಸೌಲಭ್ಯಗಳನ್ನು ಒದಗಿಸಲು ಸೂಚಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

ರಘುನಾಥ್

(ಹೆಚ್.ಬಿ. ರಘುನಾಥ್),
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

D 4/7/13

ಗೆ:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.

GOs

→

2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಹಾವೇರಿ
3. ಶ್ರೀ ಎಸ್. ಜಿ. ಪಲ್ಲೇದ್ ನಿವೃತ್ತ ಜಿಲ್ಲಾ ನ್ಯಾಯಾಧೀಶರು, (ವಿಚಾರಣಾಧಿಕಾರಿಗಳು) ಜಿಲ್ಲಾಧಿಕಾರಿಗಳ ಕಛೇರಿ, ಗದಗ ಜಿಲ್ಲೆ, ಗದಗ.
4. ಸಹಾಯಕ ಕಾರ್ಯದರ್ಶಿ, ಜಿಲ್ಲಾ ಪಂಚಾಯತ್, ಹಾವೇರಿ (ಮಂಡನಾಧಿಕಾರಿ) ಮೊಬೈಲ್ ಫೋನ್ ನಂ. 9480868005
5. ಸಂಬಂಧಿಸಿದ ಅಧಿಕಾರಿಗಳಿಗೆ (ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಹಾವೇರಿ ಇವರ ಮುಖಾಂತರ)
6. ಸರ್ಕಾರದ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿ(ಪಂ.ರಾಜ್) / ಅಪರ ಕಾರ್ಯದರ್ಶಿ (ಆಡಳಿತ), ಗ್ರಾ.ಅ. & ಪಂ.ರಾಜ್ ಇಲಾಖೆ, ಇವರ ಆಪ್ತ ಶಾಖೆಗೆ.
7. ಮೇಲ್ವಿಚಾರಕರು,ಗಣಕ ಕೋಶ, ಗ್ರಾ.ಅ. & ಪಂ.ರಾಜ್ ಇಲಾಖೆ.
8. ಮಾಹಿತಿ ಕೇಂದ್ರ/ಶಾಖಾ ರಕ್ಷಕ ಕಡತ/ಹೆಚ್ಚುವರಿ ಪ್ರತಿ